# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ವೋಚ್ಚ ನ್ಯಾಯಾಲಯದ W.P No.867/2013ರನ್ವಯ ಆ್ಯಸಿಡ್ ದಾಳಿಗೆ ಒಳಗಾದ ಮಹಿಳೆಯರು/ ಹೆಣ್ಣುಮಕ್ಕಳಿಗೆ ಪರಿಹಾರ ನೀಡುವ ಬಗ್ಗೆ

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಮಮಇ 268 ಮಮಅ 2006 ದಿನಾಂಕ: 27.11.2007
2. ಸರ್ಕಾರದ ಆದೇಶ ಸಂಖ್ಯೆ: ಮಮಇ 29 ರಾಮಅ 2013 ದಿನಾಂಕ: 20.3.2015.
3. ಸರ್ಕಾರಿ ಆದೇಶ ಸಂಖ್ಯೆ: ಮಮಇ 27 ರಾಮಅ 2015, ದಿನಾಂಕ: 20.06.2015
4. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಡತ ಸಂಖ್ಯೆ:ಆಕುಕ 2 ಐ ಎಂ ಎಂ 2015. ಸರ್ವೋಚ್ಚ ನ್ಯಾಯಾಲಯದ W.P No.867/2013 ಕುರಿತ ಕಡತ)

***

**ಪ್ರಸ್ತಾವನೆ:**

ಆ್ಯಸಿಡ್ ದಾಳಿಗೆ ಒಳಗಾದ ಮಹಿಳೆಯರು/ ಹೆಣ್ಣುಮಕ್ಕಳಿಗೆ ಪರಿಹಾರ ಕಲ್ಪಿಸುವ ಸುರಕ್ಷಾ ಯೋಜನೆಯಡಿ ಗಾಯದ ತೀವ್ರತೆಯ ಆಧಾರದ ಮೇಲೆ ಗರಿಷ್ಠ ರೂ.2.00ಲಕ್ಷ ಪರಿಹಾರವನ್ನು ಮಂಜೂರು ಮಾಡಲು ಮೇಲೆ ಕ್ರಸಂ(1)ರಲ್ಲಿ ಓದಲಾದ ದಿನಾಂಕ:27-11-2007ರ ಆದೇಶದಲ್ಲಿ ಮಂಜೂರಾತಿ ನೀಡಲಾಗಿತ್ತು.

ಸರ್ವೋಚ್ಚ ನ್ಯಾಯಾಲಯದ ರಿಟ್ ಅರ್ಜಿ (CRL)ಸಂಖ್ಯೆ:129/2006ರ ದಿನಾಂಕ:18.7.2013ರಲ್ಲಿ ನೀಡಿರುವ ಆದೇಶದನ್ವಯ ಆ್ಯಸಿಡ್ ದಾಳಿಗೆ ಒಳಗಾದ ಮಹಿಳೆಯರಿಗೆ/ಹೆಣ್ಣುಮಕ್ಕಳಿಗೆ ಸುರಕ್ಷಾ ಯೋಜನೆಯಡಿ ನೀಡಲಾಗುತ್ತಿದ್ದ ಪರಿಹಾರ ಮೊತ್ತವನ್ನು ರೂ. 2.00 ಲಕ್ಷಗಳಿಂದ ಕನಿಷ್ಠ ರೂ.3.00 (ರೂಪಾಯಿ ಮೂರು ಲಕ್ಷಗಳು ಮಾತ್ರ) ಲಕ್ಷಗಳಿಗೆ ಹೆಚ್ಚಿಸಿ ಮೇಲೆ ಕ್ರ.ಸಂ.(2)ರಲ್ಲಿ ಓದಲಾದ ದಿನಾಂಕ: 20.3.2015 ಆದೇಶಿಸಲಾಗಿದೆ.

2015-16ನೇ ಸಾಲಿನ ಆಯವ್ಯಯ ಘೋಷಣೆಯಂತೆ ಆ್ಯಸಿಡ್ ದಾಳಿ/ ದೌರ್ಜನಕ್ಕೆ ಒಳಗಾದ ಮಹಿಳೆಯರ ತುರ್ತು ಪರಿಹಾರಕ್ಕಾಗಿ ಪ್ರತಿ ಪ್ರಕರಣಕ್ಕೆ ಗರಿಷ್ಠ 2 ಲಕ್ಷ ರೂ. ಪರಿಹಾರ ಮತ್ತು ಆ್ಯಸಿಡ್ ದಾಳಿ ದೌರ್ಜನ್ಯದಿಂದ ಮೃತಪಟ್ಟಲ್ಲಿ ಕುಟುಂಬ ಸದಸ್ಯರಿಗೆ 1 ಲಕ್ಷ ರೂ. ಮರಣ ಪರಿಹಾರ ನೀಡಲು ರಾಜ್ಯ ಮಟ್ಟದಲ್ಲಿ " **ಸ್ಥೈರ್ಯ** " ಯೋಜನೆಯಡಿ ರೂ.5.00 ಕೋಟಿಗಳಲ್ಲಿ ಮಹಿಳೆಯರ ನಿಧಿಯನ್ನು ಸ್ಥಾಪಿಸಿ ಮಾರ್ಗಸೂಚಿಯನ್ವಯ ಅನುಷ್ಠಾನಗೊಳಿಸಲು ಮೇಲೆ ಕ್ರ.ಸಂ.(3)ರಲ್ಲಿ ಓದಲಾದ ದಿನಾಂಕ: 20.3.2015ರ ಆದೇಶದಲ್ಲಿ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

ಮೇಲೆ ಕ್ರ.ಸಂ.(4)ರಲ್ಲಿ ಓದಲಾದ ಕಡತದಲ್ಲಿ ಸರ್ವೋಚ್ಚ ನ್ಯಾಯಾಲಯದ W.P No.867/2013 ರ ಆದೇಶದನ್ವಯ ತುರ್ತು ಅಲ್ಪಾವಧಿ ಹಾಗೂ ದೀರ್ಘಾವಧಿ ಚಿಕಿತ್ಸೆ – ಪ್ಲಾಸ್ಟಿಕ್ ಸರ್ಜರಿ ಹಾಗೂ ಕರೆಕ್ಟಿವ್ ಪ್ಲಾಸ್ಟಿಕ್ ಸರ್ಜರಿ ವೆಚ್ಚಗಳಿಗಾಗಿ ಪ್ರತಿ ಫಲಾನುಭವಿಗೆ ಗರಿಷ್ಠ ರೂ.20.00ಲಕ್ಷಗಳ ಮಿತಿಯವರೆಗೆ ಭರಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಹಣಕಾಸಿನ ಸೌಲಭ್ಯ ಒದಗಿಸುವುದರ ಜೊತೆಗೆ ಈ ಯೋಜನೆಯಡಿ 1. ಸರ್ಕಾರಿ ಆಸ್ಪತ್ರೆಯಲ್ಲಿ ಉಚಿತ ವೈದ್ಯಕೀಯ ನೆರವು ನೀಡುವುದು. 2. ಸರ್ಕಾರಿ ಆಸ್ಪತ್ರೆಯಲ್ಲಿ ಲಭ್ಯವಿಲ್ಲದ ನೆರವನ್ನು ಎಲ್ಲಾ ಸೌಲಭ್ಯವಿರುವ ಖಾಸಗಿ ಆಸ್ಪತ್ರೆಗಳಲ್ಲಿ ಸಂಪೂರ್ಣ ಚಿಕಿತ್ಸೆ ನೀಡುವುದು. ಆ್ಯಸಿಡ್ ದಾಳಿಗೆ ಒಳಗಾದ ಮಹಿಳೆಯರಿಗೆ/ಹೆಣ್ಣುಮಕ್ಕಳಿಗೆ ವಿಶೇಷ ವರ್ಗವೆಂದು ಪರಿಗಣಿಸಿ ವಿಕಲಚೇತನರ ವರ್ಗದಡಿ ಮಾಸಿಕ ರೂ.3000.00 (ಮೂರು ಸಾವಿರ ರೂಪಾಯಿಗಳು ಮಾತ್ರ) ಮಾಸಾಶನ ನೀಡಲು ಕಂದಾಯ ಇಲಾಖೆಯು ಸೂಕ್ತ ಆದೇಶವನ್ನು ಪ್ರತ್ಯೇಕವಾಗಿ ಹೊರಡಿಸುವುದು.

ಮೇಲಿನ ಎಲ್ಲಾ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಮಮಇ 38 ರಾಮಆ 2015, ದಿನಾಂಕ: 19.09.2015**

ಕರ್ನಾಟಕ ರಾಜ್ಯದಲ್ಲಿ ಆಸಿಡ್‌ದಾಳಿಗೆ ಒಳಗಾದ ಮಹಿಳೆಯರು/ ಹೆಣ್ಣು ಮಕ್ಕಳಿಗೆ ಆದೇಶ ಸಂಖ್ಯೆ: ಮಮಇ 29 ರಾಮಆ 2013, ದಿನಾಂಕ: 20.03.2015ರಲ್ಲಿನ ಸೌಲಭ್ಯದೊಂದಿಗೆ ತುರ್ತು ಅಲ್ಪಾವಧಿ ಹಾಗೂ ಧೀರ್ಘಾವಧಿ ಚಿಕಿತ್ಸೆ – ಪ್ಲಾಸ್ಟಿಕ್ ಸರ್ಜರಿ, ಕರೆಕ್ಟಿವ್ ಪ್ಲಾಸ್ಟಿಕ್ ಸರ್ಜರಿ ಹಾಗೂ ವಿಶೇಷ ಮಾನಸಿಕ ಚಿಕಿತ್ಸೆಗಾಗಿ ಸರ್ಕಾರಿ ಆದೇಶ ಸಂಖ್ಯೆ: ಮಮಇ 268 ಮಮಅ 2006, ದಿನಾಂಕ: 27.11.2007ರಲ್ಲಿನ ಮಾರ್ಗಸೂಚಿಗಳನ್ನು ಹಾಗೂ ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಇದರೊಂದಿಗೆ 1) ಸರ್ಕಾರಿ ಆಸ್ಪತ್ರೆಯಲ್ಲಿ ಉಚಿತ ವೈದ್ಯಕೀಯ ನೆರವು ನೀಡುವುದು. 2) ಸರ್ಕಾರಿ ಆಸ್ಪತ್ರೆಯಲ್ಲಿ ಲಭ್ಯವಿಲ್ಲದ ನೆರವನು, ಎಲ್ಲಾ ಸೌಲಭ್ಯವಿರುವ ಖಾಸಗಿ ಆಸ್ಪತ್ರೆಗಳಲ್ಲಿ ಸಂಪೂರ್ಣ ಚಿಕಿತ್ಸೆ ನೀಡುವುದು. 3) ಖಾಸಗಿ ಆಸ್ಪತ್ರೆಯಲ್ಲಿ ಪಡೆಯುವ ಚಿಕಿತ್ಸೆಗೆ ತಗಲುವ ವೆಚ್ಚವನ್ನು ಪೊಲೀಸ್ ಇಲಾಖೆಯಿಂದ ಪ್ರಥಮ ವರ್ತಮಾನ ವರದಿಯನ್ನು ಪಡೆದು (ಎಫ್.ಐ.ಆರ್) ಜಿಲ್ಲಾ ಸರ್ಜನರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರು ದೃಢೀಕರಿಸುವ ಮೊತ್ತಕ್ಕೆ ಸೀಮಿತವಾಗುವ ಷರತ್ತಿಗೊಳಪಟ್ಟು ಆಸಿಡ್ ದಾಳಿಗೊಳಗಾದ ಪ್ರತಿ ಫಲಾನುಭವಿಗೆ ಗರಿಷ್ಠ ರೂ.20.00ಲಕ್ಷಗಳ (ರೂಪಾಯಿ ಇಪ್ಪತ್ತು ಲಕ್ಷಗಳು ಮಾತ್ರ) ಮಿತಿಗೆ ಸೀಮಿತಗೊಳಿಸಿ ಚಿಕಿತ್ಸಾ ವೆಚ್ಚ ಭರಿಸಲು ಮಂಜೂರಾತಿ ನೀಡಲಾಗಿದೆ.

ಸದರಿ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2235-02-103-0-50-059-ಸುರಕ್ಷಾ ಯೋಜನೆಯಡಿಯಲ್ಲಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಡತ ಸಂಖ್ಯೆ: HFW 02 IMM 2015ರ ಕಂಡಿಕೆ 37 (i)ರಲ್ಲಿ ದಿನಾಂಕ: 15.09.2015ರಂದು ಆರ್ಥಿಕ ಇಲಾಖೆಯು ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

19/9/15
(ಜಯಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ -2
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಹಾಗೂ ವಿಕಲಚೇತನರ ಮತ್ತು ಹಿರಿಯ
ನಾಗರಿಕರ ಸಬಲೀಕರಣ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಜಿ & ಎಸ್‌ಎಸ್‌ಎ/ ಇಆರ್‌ಎಸ್‌ಎ ಮತ್ತು ಎ & ಇ )ಅಂಚೆ ಪೆಟ್ಟಿಗೆ ಸಂಖ್ಯೆ: 5398, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ರಾಜ್ಯ ಆಯುಕ್ತರು, ಅಂಗವಿಕಲ ವ್ಯಕ್ತಿಗಳ ಅಧಿನಿಯಮ ಕಛೇರಿ, ರಿಸಲ್ದಾರ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು.
4. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು.\

5. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು.
6. ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ಬೆಂಗಳೂರು.
8. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಕಾವೇರಿ ಭವನ, ಬೆಂಗಳೂರು.
9. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನ ಸೌಧ, ಬೆಂಗಳೂರು.
10. ಎಲ್ಲಾ ಜಿಲ್ಲಾಧಿಕಾರಿಗಳು/ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು (ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರ ಮುಖಾಂತರ)
11. ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ (ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರ ಮುಖಾಂತರ)
12. ಎಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳು, (ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರ ಮುಖಾಂತರ)
13. ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನ ಸೌಧ, ಬೆಂಗಳೂರು.
14. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
15. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
16. ಸರ್ಕಾರದ ಉಪ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕರು, ಬೆಂಗಳೂರು.
17. ಶಾಖಾಧಿಕಾರಿ, ಸ್ವೀಮರ ಶಾಖೆ, ಮಹಿಳಾ ಮತ್ತು ಮಕ್ಕಳ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು
18. ಶಾಖಾ ಕಡತ/ ಹೆಚ್ಚುವರಿ ಪ್ರತಿಗಳು.